# ನೇಮಕಾತಿಗೆ ತಾತ್ಕಾಲಿಕ ತಡೆ

ಬೆಳಗಾವಿ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಜಿಲ್ಲೆಗೆ ಸಂಬಂಧಪಟ್ಟಂತೆ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ಸಮುದಾಯ ಆರೋಗ್ಯ ಅಧಿಕಾರಿಗಳ (ಸಿಎಚ್‌ಒ) 44 ಹುದ್ದೆಯ ನೇಮಕಾತಿಗಾಗಿ ಜ. 4ರಂದು ಆನ್ ಲೈನ್ ಅರ್ಜಿ ಆಹ್ವಾನಿಸಲಾಗಿತ್ತು. ಸದರಿ ವಿಷಯಕ್ಕನುಸಾರವಾಗಿ ಅಭಿಯಾನ ನಿರ್ದೇಶಕರು, ಎನ್‌ಎಚ್‌ಎಂ ಬೆಂಗಳೂರು ಇವರು ಜ. 19ರಂದು ಹುದ್ದೆ ನೇಮಕಾತಿ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದ ಮಧ್ಯಂತರ ಸೂಚನೆಯಂತೆ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ ಎಂದು ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.